## 39. ಎಸ್.ಎಸ್.ಎಲ್.ಸಿ ಪರೀಕ್ಷೆ ರದ್ದಾಗುವುದಿಲ್ಲ : ಸಚಿವರ ಸ್ಪಷ್ಟನೆ

ಎಸ್.ಎಸ್.ಎಲ್.ಸಿ. ಪರೀಕ್ಷೆ ನಡೆದೇ ನಡೆಯುತ್ತದೆ. ಲಾಕ್‌ಡೌನ್ ಅವಧಿ ಮುಗಿಯಲಿರುವ ಮೇ 3ರ ನಂತರ ಈ ಬಗ್ಗೆ ತೀರ್ಮಾನಿಸಲಾಗುವುದು ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ಹೇಳಿದರು.

ತಾಲ್ಲೂಕಿನ ಸಂತೇಮರಹಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಈ ವರ್ಷ ಪರೀಕ್ಷೆ ನಡೆಯುವುದೇ ಅನುಮಾನ ಎಂದು ಕೆಲವರು ಗೊಂದಲ ಮೂಡಿಸುತ್ತಿದ್ದಾರೆ. ಮಕ್ಕಳ ಮನಸ್ಸಿನಲ್ಲಿ ಪರೀಕ್ಷೆ ಕುರಿತಂತೆ ಯಾವುದೇ ಗೊಂದಲ ಇಲ್ಲ. ಆದರೆ, ಕೆಲವು ಪೋಷಕರಿಗೆ ಆತಂಕವಿದೆ ಎಂದು ಹೇಳಿದರು.

ಆಧಾರ:ಪ್ರಜಾವಾಣಿ, ದಿನಾಂಕ:24.04.2020.